ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು-560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 10.11.2020

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
## (ದಿನಾಂಕ 11-11-2020 ರಿಂದ 15-11-2020 ವರೆಗೆ)

| ನಿಯತಾಂಕಗಳು | 11.11.2020 | 12.11.2020 | 13.11.2020 | 14.11.2020 | 15.11.2020 |
|---|---|---|---|---|---|
| ಮಳೆ (ಮಿ ಮಿ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 28 | 28 | 28 | 28 | 28 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 18 | 18 | 20 | 21 | 21 |
| ಮೋಡ ( ಪ್ರಮಾಣ) | 3 | 3 | 6 | 6 | 4 |
| ಅರ್ದ್ರತೆ 7.20 ಬೆ (ಶೇ) | 77 | 77 | 78 | 78 | 77 |
| ಅರ್ದ್ರತೆ 2.20 ಮ (ಶೇ) | 73 | 73 | 75 | 76 | 75 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 4 | 5 | 4 | 4 | 5 |
| ಗಾಳಿಯ ದಿಕ್ಕು ( ಡಿಗ್ರಿ) | 68 | 68 | 68 | 68 | 68 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಮಳೆಯಾಗುವ ಸಾಧ್ಯತೆ ಕಡಿಮೆ. ದಿನದ ಗರಿಷ್ಠ ಉಷ್ಣಾಂಶ $28.0^{o}$ C ಮತ್ತು ಕನಿಷ್ಠ 18.0-21.0$^{o}$C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ 77-78 % ಇದ್ದು ಮಧ್ಯಾಹ್ನ 73-76 % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 4-5 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

### "ವಿಶಾಖ ಹಿಡಿದರೆ ಪಿಶಾಚಿ ಹಿಡಿದಂತೆ!"

- ವಿಶಾಖ ಮಳೆಯು ಕಾಲವು ನವೆಂಬರ್ ತಿಂಗಳ 06 ರಿಂದ ನವೆಂಬರ್ ತಿಂಗಳ 19 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 26.7 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ /ಹಿಂಗಾರು ಬೆಳೆಗಳು | ➢ ಕಟಾವಿಗೆ ಬಂದಿರುವ ಮೆಕ್ಕೆಜೋಳ, ರಾಗಿ ಮತ್ತು ನೆಲಗಡಲೆಯನ್ನು ಕಟಾವು ಮಾಡಿ.<br>➢ ಮೆಕ್ಕೆಜೋಳದ ಬೆಳೆಯಲ್ಲಿ ಕಾಂಡಕೊರಕದ ಭಾದೆಯನ್ನು ತಡೆಗಟ್ಟಲು ಕ್ವಿನಾಲ್‌ಫಾಸ್ 25 ಇ.ಸಿ @ 2 ಮಿ. ಲೀ ಪ್ರತಿ ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸಿ ಅಥವಾ ಕ್ಲೋರೊಪೈರಿಫಾಸ್ 20 ಇ.ಸಿ @ 2 ಮಿ. ಲೀ ಪ್ರತಿ ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸಿ<br>➢ ಮೆಕ್ಕೆಜೋಳದಲ್ಲಿ ತೆನೆಯನ್ನು ತಿನ್ನುವ ಹುಳುವನ್ನು ನಿಯಂತ್ರಿಸಲು ಮ್ಯಾಲಥಿಯಾನ್ 50 ಇ.ಸಿ @ 2 ಮಿ. ಲೀ ಪ್ರತಿ ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br>➢ ತೊಗರಿ ಬೆಳೆಯಲ್ಲಿ ಮೊಗ್ಗು ಮತ್ತು ಹೂವಿನ ಹಂತದಲ್ಲಿ ಕಾಯಿಕೊರಕ ಹುಳುವಿನ ಜೈವಿಕ ಹತೋಟಿ ಮಾಡಲು ಎಕರೆಗೆ 200 ಎಲ್.ಇ ನಂಜು ರೋಗಾಣು (ಹೆಚ್.ಎ.ಎನ್.ಪಿ.ವಿ) ಗಳನ್ನು 400 ಲೀಟರ್ ನೀರಿನಲ್ಲಿ ಸೇರಿಸಿ ಶೇ.0.1 ಟೀಪಾಲ್ ಮತ್ತು ಶೇ. 0.5 ರ ಬೆಲ್ಲದ ಪಾಕವನ್ನು ಬೆರೆಸಿ ಸಾಯಂಕಾಲದ ಸಮಯದಲ್ಲಿ ಸಿಂಪಡಿಸಬೇಕು. ಇದರಿಂದ ಮರಿ ಹುಳುಗಳಿಗೆ ನಂಜಾಣು ರೋಗ ತಗಲಿ ತಲೆ ಕೆಳಗಾಗಿ ನೇತಾಡುತ್ತಾ ಸಾಯುತ್ತವೆ ಮತ್ತು ಹೆಲಿಕೊವರ್ಪ ಮೋಹಕ ಬಲೆಗಳನ್ನು ಹೆಕ್ಟೇರ್ ಗೆ 10 ನ್ನು ಬಳಸಬೇಕು ಹಾಗು 20 ದಿನಗಳಿಗೊಮ್ಮೆ ಮೋಹಕ ವಸ್ತು (ಲ್ಯೂರ್) ಬದಲಿಸಬೇಕು.<br>➢ ತೊಗರಿಯಲ್ಲಿ ಗೂಡುಮಾರುಹುಳುವಿನ ಹತೋಟಿಗೆ ಹೂ ಬರುವ ಮೊದಲು ಕುಡಿಗಳ ಮೇಲೆ ಮಿಥೋಮಿಲ್ 40 ಎಸ್.ಪಿ 2 ಗ್ರಾಂ/ ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br>**ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ** |

| | |
|---|---|
| | ➢ ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಬಿತ್ತನೆ/ನಾಟಿ ಮಾಡುವುದು. |
| | **ಹೈನುಗಾರಿಕೆ** |
| **ಪಶುಸಂಗೋಪನೆ** | ➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |

**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**